# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1604
ಸದಸ್ಯರ ಹೆಸರು : ಶ್ರೀ ಎ. ವಸಂತ ಕುಮಾರ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 18.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಯಚೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಬಸ್‌ಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ಜಿಲ್ಲೆಯಲ್ಲಿ ಒಟ್ಟು 681 ಬಸ್ಸುಗಳು ಕಾರ್ಯ ನಿರ್ವಹಿಸುತ್ತಿವೆ. |
| ಆ. | ಗ್ರಾಮೀಣ ಹಾಗೂ ಗಡಿ ಭಾಗಗಳಲ್ಲಿ ಬಸ್ ಸೇವೆಗಳ ಕೊರತೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಯಚೂರು ವಿಭಾಗದ ವ್ಯಾಪ್ತಿಯ ಒಟ್ಟು 883 ಜನವಸತಿ ಗ್ರಾಮಗಳ ಪೈಕಿ 867 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಳಿದ 16 ಗ್ರಾಮಗಳಿಗೆ ಭಾರೀ ವಾಹನಗಳ ಕಾರ್ಯಾಚರಣೆಗೆ ಯೋಗ್ಯ ರಸ್ತೆ ಇಲ್ಲದಿರುವುದರಿಂದ ಸಾರಿಗೆ ಸೌಲಭ್ಯ ಕಲ್ಪಿಸಿರುವುದಿಲ್ಲ. ಆದಾಗ್ಯೂ ರಸ್ತೆ ಸಂಪರ್ಕವಿರುವ ಸಮೀಪದ ಗ್ರಾಮಗಳವರೆಗೆ ಬಸ್ ಸೌಲಭ್ಯ ಕಲ್ಪಿಸಲಾಗಿರುತ್ತದೆ.<br><br>ರಾಯಚೂರು ವಿಭಾಗದ ವ್ಯಾಪ್ತಿಯ 08 ಘಟಕಗಳಿಂದ 16 ನಗರ, 242 ಸಾಮಾನ್ಯ,, 358 ವೇಗದೂತ ಹಾಗೂ 24 ಪ್ರತಿಷ್ಠಿತ ಸಾರಿಗೆಗಳು ಸೇರಿದಂತೆ ಒಟ್ಟು 640 ಅನುಸೂಚಿಗಳಿಂದ 3632 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಈ ಪೈಕಿ ಗ್ರಾಮೀಣ/ಗಡಿ ಭಾಗದಲ್ಲಿ 242 ಸಾಮಾನ್ಯ ಸಾರಿಗೆಗಳಿಂದ 2368 ಸುತ್ತುವಳಿಗಳನ್ನು ಕಾರ್ಯಾಚರಿಸಲಾಗುತ್ತಿದೆ. ಇದು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಅವಶ್ಯಕತೆಗನುಗುಣವಾಗಿರುತ್ತದೆ.<br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ಬಸ್‌ಗಳನ್ನು ಖರೀದಿಸಿರಲಿಲ್ಲ.**<br><br>ಆದರೆ, 2023-24 ರಿಂದ 2025-26ರವರೆಗೆ ಖರೀದಿಸಿರುವ / ಖರೀದಿ ಹಂತದಲ್ಲಿರುವ ಹೊಸ ಬಸ್ಸುಗಳ ವಿವರ ಕೆಳಕಂಡಂತಿದೆ: |

| ಸಂಸ್ಥೆಗಳು | 2023-24 (Jan) | 2024-25 | 2025-26 | ಒಟ್ಟು |
|---|---|---|---|---|
| ಕ.ಕ.ರ.ಸಾ. ನಿಗಮ | 720 | 307 | 146 | 1173 |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>ಮುಂದುವರೆದು, ಈಗಾಗಲೇ ಟೆಂಡರ್ ಪ್ರಕ್ರಿಯೆ ಅಂತಿಮಗೊಂಡಿದ್ದು, ಮಾರ್ಚ್-2026ರ ನಂತರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಸೇರ್ಪಡೆಗೊಳ್ಳಲಿರುವ ಒಟ್ಟು ಬಸ್‌ಗಳು ವಿವರ ಕೆಳಕಂಡಂತಿರುತ್ತದೆ:
<table>
<tr><th>ಸಂಸ್ಥೆ/ನಿಗಮ</th><th>ಬಸ್‌ಗಳ ಸಂಖ್ಯೆ</th><th>ಬಸ್‌ಗಳ ವಿವರ</th></tr>
<tr><td>ಕ.ಕ.ರ.ಸಾ.ನಿಗಮ</td><td>56</td><td>ವಿವಿಧ ರೀತಿಯ ಪ್ರೀಮಿಯಂ ಬಸ್‌ಗಳು</td></tr>
</table>
ಕೇಂದ್ರ ಸರ್ಕಾರದ PM e-sewa ಯೋಜನೆಯಡಿಯಲ್ಲಿ ನಿಗಮ ಒಟ್ಟು 200 ವಿದ್ಯುತ್ ಚಾಲಿತ ಬಸ್ಸುಗಳನ್ನು GCC ಮಾದರಿಯಲ್ಲಿ ಆಚರಣೆ ಮಾಡಲು ಮಂಜೂರಾತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಸೇರ್ಪಡೆಗೊಳಿಸಲು ಯೋಜಿಸಲಾಗಿರುತ್ತದೆ.<br><br>
2025-26ನೇ ಸಾಲಿನ ಆಯವ್ಯಯ ಕಂಡಿಕೆ 469 (iii)ರ ಘೋಷಣೆಯನ್ವಯ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 400 ಬಸ್ಸುಗಳನ್ನು ಹಂಚಿಕೆ ಮಾಡಲಾಗಿದ್ದು, ಸದರಿ ಬಸ್ಸುಗಳ ಖರೀದಿಗೆ ಅನುದಾನ ಮಂಜೂರಾತಿ ಕೋರಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುದಾನ ನಿರೀಕ್ಷಿಸಲಾಗಿದೆ.<br><br>
2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 480 ರಲ್ಲಿ ನಾಲ್ಕು ಸಾರಿಗೆ ನಿಗಮಗಳಿಗೆ 1000 ಡೀಸೆಲ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.</td></tr>
<tr><td>ಇ.</td><td>ಹೊಸ ಮಾರ್ಗಗಳನ್ನು ಪ್ರಾರಂಭಿಸಲು ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;</td><td>ಪ್ರಯಾಣಿಕರ ಅನುಕೂಲಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಒಟ್ಟು 10 ಹೊಸ ಮಾರ್ಗಗಳಲ್ಲಿ ಸಾರಿಗೆಗಳನ್ನು ಪ್ರಾರಂಭಿಸಿ ಕಾರ್ಯಾಚರಣೆ ಮಾಡಲಾಗುತ್ತಿದ್ದು, ವಿವರಗಳನ್ನು ಅನುಬಂಧ-ದಲ್ಲಿ ನೀಡಲಾಗಿದೆ.</td></tr>
<tr><td>ಈ.</td><td>ರಾಯಚೂರು ಬಸ್ ನಿಲ್ದಾಣ ಮೇಲ್ದರ್ಜೆಗೇರಿಸುವಿಕೆಗಾಗಿ ಮಂಜೂರಾದ ಅನುದಾನವೆಷ್ಟು;</td><td>ರಾಯಚೂರಿನಲ್ಲಿ ನೂತನ ಬಸ್ ನಿಲ್ದಾಣವನ್ನು 2012-13ನೇ ಸಾಲಿನಲ್ಲಿ ರೂ.485.00 ಲಕ್ಷಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲಾಗಿದೆ.<br>ಮುಂದುವರೆದು, 2017-18ನೇ ಸಾಲಿನಲ್ಲಿ ರೂ.50.00 ಲಕ್ಷಗಳ ಅಂದಾಜು ಮೊತ್ತದಲ್ಲಿ ರಾಯಚೂರು ಬಸ್ ನಿಲ್ದಾಣದಲ್ಲಿ ಹೆಚ್ಚುವರಿ ಬಸ್ ತಂಗುದಾಣವನ್ನು ನಿರ್ಮಾಣ ಇತ್ಯಾದಿ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗಿದೆ.</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | 2018-19ನೇ ಸಾಲಿನಲ್ಲಿ ರೂ.75.00 ಲಕ್ಷಗಳ ಅಂದಾಜು ಮೊತ್ತದಲ್ಲಿ ರಾಯಚೂರು ಬಸ್ ನಿಲ್ದಾಣವನ್ನು ಹೆಚ್ಚುವರಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ. |
| ಉ | ಮಹಿಳೆಯರ ಉಚಿತ ಪ್ರಯಾಣ ಯೋಜನೆಯಿಂದ ರಾಯಚೂರು ಜಿಲ್ಲೆಯಲ್ಲಿ ಪ್ರಯಾಣಿಕರ ಸಂಖ್ಯೆ ಎಷ್ಟು ಹೆಚ್ಚಾಗಿದೆ? | ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿ ಶಕ್ತಿ ಯೋಜನೆ ಪೂರ್ವದಲ್ಲಿ ಪ್ರತಿದಿನ ಸರಾಸರಿ 1.40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದು, ಪ್ರಸ್ತುತ ಪ್ರತಿ ದಿನ ಸರಾಸರಿ 2.03 ಪ್ರಯಾಣಿಕರು ಪ್ರಯಾಣಿಸುತ್ತಿರುತ್ತಾರೆ. ಶಕ್ತಿ ಯೋಜನೆ ಪೂರ್ವಕ್ಕೆ ಹೋಲಿಸಿದಲ್ಲಿ ಪ್ರತಿ ದಿನ ಪ್ರಯಾಣಿಸುವ ಸರಾಸರಿ ಪ್ರಯಾಣಿಕರ ಸಂಖ್ಯೆ 63,000 ಹೆಚ್ಚಳವಾಗಿರುತ್ತದೆ. |

ಸಂಖ್ಯೆ: ಟಿಡಿ 92 ಟಿಸಿಕ್ಯೂ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು

ಅನುಬಂಧ-"ಅ"

| ಕ್ರ.ಸಂ | ಘಟಕ | ಅನುಸೂಚಿ ಸಂಖ್ಯೆ | ಮಾರ್ಗ | |
|---|---|---|---|---|
| | | | ಇಂದ | ವರೆಗೆ |
| 1 | ಮಸ್ಕಿ | 45 | ಸಿಂಧನೂರು-ಮಸ್ಕಿ | ವಿಜಯಪುರ |
| 2 | ದೇವದುರ್ಗ | 93/94 | ದೇವದುರ್ಗ-ರಾಯಚೂರು | ಕೆಂಭಾವಿ |
| 3 | ಮಾನ್ವಿ | 46/47 | ಸಿಂಧನೂರು-ರಾಯಚೂರು | ಮುದ್ದೇಬಿಹಾಳ |
| 4 | ರಾಯಚೂರು-1 | 31/32 | ದಾವಣಗೆರೆ | ಮಂತ್ರಾಲಯ |
| 5 | ರಾಯಚೂರು-1 | 37/38 | ರಾಯಚೂರು | ಹುಲಿಗಿ |
| 6 | ದೇವದುರ್ಗ | 15/16 | ದೇವದುರ್ಗ | ಮಂತ್ರಾಲಯ |
| 7 | ರಾಯಚೂರು-3 | 34/35 | ರಾಯಚೂರು | ಮಂಡ್ಯ |
| 8 | ಮಸ್ಕಿ | 3 | ಮಸ್ಕಿ | ಯಾದಗಿರಿ |
| 9 | ಲಿಂಗಸುಗೂರು | 74 | ಲಿಂಗಸುಗೂರು | ಮುಧೋಳ |
| 10 | ರಾಯಚೂರು-3 | 83/84 | ನವೋದಯ | ಬಿಜಿನಗೇರಾ |

ಮುಖ್ಯ ಸಂಚಾರ ವ್ಯವಸ್ಥಾಪಕರು,
ಕ.ಕ.ರ.ಸಾ.ನಿ., ಕೇ.ಕ., ಕಲಬುರಗಿ